**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು**

ದಿನಾಂಕಃ 06ನೇ ಆಗಸ್ಟ್ ತಿಂಗಳು 2025ರಂದು

**ಸಿಸಿ ನಂ.241/2024**

**ಫಿರ್ಯಾದುದಾರರುಃ** ಶ್ರೀ ಗಣೇಶ್.ಟಿ.ಎಸ್. ಬಿನ್ ಶೇಖರೇಗೌಡ,
ವಯಸ್ಸು 35ವರ್ಷ, ವಾಸಃ ತಿಪ್ಪಲಪುರ ಗ್ರಾಮ,
ಕೊತ್ತೇಗಾಲ ಪೋಸ್ಟ್, ಗಾವಡಗೆರೆ ಹೋಬಳಿ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀ ಚಂದ್ರಶೇಖರ್ ಬಿನ್ ಅಪ್ಪಣ್ಣ,
ವಯಸ್ಸು 30ವರ್ಷ, ವಾಸಃ ಹೆಮ್ಮಿಗೆ ಕಾಲೋನಿ,
ಹರೀನಹಳ್ಳಿ ಪೋಸ್ಟ್, ಹನಗೋಡು ಹೋಬಳಿ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 251ರ ಅಡಿಯಲ್ಲಿ ಆರೋಪಣಾ ಸಾರಾಂಶ**

ಆರೋಪಿಯಾದ ನೀವು ಮತ್ತು ಫಿರ್ಯಾದಿದಾರರಾದ ಶ್ರೀ ಗಣೇಶ್.ಟಿ.ಎಸ್ ರವರು ಹಲವಾರು ವರ್ಷಗಳಿಂದ ಪರಿಚಿತರಾಗಿದ್ದು, ನೀವು ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ಅಂದರೆ ನಿಮ್ಮ ವ್ಯಾಪಾರದ ಅಭಿವೃದ್ಧಿಗಾಗಿ ಫೆಬ್ರವರಿ – 2024ರಂದು ರೂ.3,00,000/– ಗಳನ್ನು ಮೂರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ನೀವು 03.05.2024 ರ ದಿನಾಂಕ ನಮೂದಿಸಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬೈಪಾಸ್ ರಸ್ತೆ, ಹುಣಸೂರು ಶಾಖೆಯ ಚೆಕ್ ಸಂಖ್ಯೆ 5933 23 ಅನ್ನು ರೂ.3,00,000/–ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅದನ್ನು ಫಿರ್ಯಾದಿದಾರರು ತಮ್ಮ ಖಾತೆ ಹೊಂದಿದ ಸ್ಟೇಟ್ ಬ್ಯಾಂಕ್ ಆಫ್

ಇಂಡಿಯಾ, ಕೃಷಿ ವಾಣಿಜ್ಯ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕ 06.05.2024 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದಿದಾರರು ದಿನಾಂಕ 07.05.2024 ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯಲ್ಲಿ ನೋಟೀಸನ್ನು ನೀಡಿದ್ದು, ಸದರಿ ನೋಟೀಸು ದಿನಾಂಕ 11.05.2024 ರಂದು ನಿಮಗೆ ಖುದ್ದಾಗಿ ಜಾರಿಯಾಗಿದ್ದರೂ ಸಹ ನೀವು ಚೆಕ್‌ನಲ್ಲಿ ನಮೂದಿಸಿದ ಹಣವನ್ನು ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ 138ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆ:1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ: 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ